# ತುಮಕೂರು ವಿಶ್ವವಿದ್ಯಾನಿಲಯ

ತುವಿ:ಸಾ&ಅ:ಅ.ಉ.ನೇ:2021-22/2241 ದಿನಾಂಕ:18.10.2021

## : ಅಧಿಸೂಚನೆ :

ತುಮಕೂರು ವಿಶ್ವವಿದ್ಯಾನಿಲಯದಲ್ಲಿ 2021-22ನೇ ಶೈಕ್ಷಣಿಕ ಸಾಲಿಗೆ ಸ್ನಾತಕ ಪದವಿ ತರಗತಿಗಳಿಗೆ ವಿಷಯವಾರು ಬೋಧನೆ ಮಾಡಲು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡುವ ಸಂಬಂಧ ಅರ್ಹ ಭಾರತೀಯ ಪ್ರಜೆಗಳಿಂದ ಆನ್‌ಲೈನ್ ಮುಖೇನ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಸ್ನಾತಕ ಪದವಿಯ ವಿಷಯಗಳು: ಕನ್ನಡ, ಇಂಗ್ಲೀಷ್, ಇತಿಹಾಸ, ವಾಣಿಜ್ಯಶಾಸ್ತ್ರ, ಸಮಾಜಕಾರ್ಯ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಗಣಕಯಂತ್ರವಿಜ್ಞಾನ, ವಿದ್ಯುನ್ಮಾನ, ಸೂಕ್ಷ್ಮಜೀವಶಾಸ್ತ್ರ, ಭೌತಶಾಸ್ತ್ರ, ಜೈವಿಕ ತಂತ್ರಜ್ಞಾನ.

ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದಂತೆ, ಅಧಿಸೂಚನೆ ಮತ್ತು ಮಾನದಂಡಗಳನ್ನು ವಿಶ್ವವಿದ್ಯಾನಿಲಯದ ಜಾಲತಾಣ www.tumkuruniversity.ac.in ರಿಂದ ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು. ಅಭ್ಯರ್ಥಿಗಳು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಆನ್‌ಲೈನ್ ಮೂಲಕ ದಿನಾಂಕ:24.10.2021 ರೊಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು. ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಚುರಪಡಿಸಲಾಗುವುದು ಹಾಗೂ ಅಭ್ಯರ್ಥಿಗಳು ವಿಶ್ವವಿದ್ಯಾನಿಲಯವು ಪ್ರಕಟಿಸುವ ದಿನಾಂಕದಂದು ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಸಂದರ್ಶನಕ್ಕೆ ಸಂಬಂಧಿಸಿದಂತೆ, ಅಭ್ಯರ್ಥಿಗಳು ವಿಶ್ವವಿದ್ಯಾನಿಲಯದ ಜಾಲತಾಣವನ್ನು ನಿರಂತರವಾಗಿ ವೀಕ್ಷಿಸುವುದು. ಸಂದರ್ಶನದ ಬಗ್ಗೆ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ತಿಳಿಸಲಾಗುವುದಿಲ್ಲ. ಆಯ್ಕೆಗೆ ಸಂಬಂಧಿಸಿದಂತೆ, ಸರ್ಕಾರದ ನಿಯಮಾವಳಿಗಳನ್ನು ಪಾಲಿಸಲಾಗುವುದು. ವಿಷಯ ಮತ್ತು ಅತಿಥಿ ಉಪನ್ಯಾಸಕರ ನೇಮಕಾತಿ ಸಂಖ್ಯೆಯಲ್ಲಿ ಬದಲಾವಣೆಯಾದಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.

18/10/21

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

Scanned with CamScanner

# ಅತಿಥಿ ಉಪನ್ಯಾಸಕರ ಆಯ್ಕೆಯ ಮಾನದಂಡಗಳು

1. ಅಭ್ಯರ್ಥಿಗಳು ಯಾವುದಾದರೂ ಪದವಿ ಕುರಿತು ಮಾಹಿತಿ ತಪ್ಪಾಗಿ ನೀಡಿದ್ದಲ್ಲಿ ಅಥವಾ ಮೂಲ ದಾಖಲೆಗಳನ್ನು ಪರಿಶೀಲನೆಗೆ ಸಲ್ಲಿಸಲು ವಿಫಲರಾದಲ್ಲಿ ಅವರ ಅಂಕಗಳನ್ನು (re-assess) ಮಾಡಿ ಪರಿಷ್ಕೃತ ಅಂಕಗಳನ್ನು ನಿರ್ಧರಿಸಲಾಗುವುದು. ಅಭ್ಯರ್ಥಿಯ ಪರಿಷ್ಕೃತ ಅಂಕಗಳ ಮೆರಿಟ್ ಪ್ರಕಾರ ಅವಕಾಶ ನೀಡಲಾಗುವುದು ಹಾಗೂ ಇಂತಹ ಪ್ರಕರಣಗಳ ಕುರಿತಂತೆ ದಾಖಲೆಗಳನ್ನು ನಿರ್ವಹಿಸಲಾಗುವುದು.
2. ಕೊನೆಯ ದಿನಾಂಕದೊಳಗೆ ಅರ್ಹತೆಗೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸದ ಅಥವಾ ಅರ್ಹತಾ ಪದವಿಯನ್ನು ಪೂರ್ಣಗೊಳಿಸದಿರುವ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.
3. ಅತಿಥಿ ಉಪನ್ಯಾಸಕರ ಅಗತ್ಯವಿಲ್ಲದಿರುವ ವಿಷಯಗಳಿಗೆ ಅರ್ಜಿಯನ್ನು ಸಲ್ಲಿಸಿದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ಅತಿಥಿ ಉಪನ್ಯಾಸಕರು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ವಿಭಿನ್ನ ಕೋಡ್ ಬಳಸಿ ಸಲ್ಲಿಸಿದಲ್ಲಿ ಅಂತಹ ಸಂದರ್ಭದಲ್ಲಿ ಅಭ್ಯರ್ಥಿಯೊಂದಿಗೆ ದೂರವಾಣಿ ಮೂಲಕ ಸಂಪರ್ಕಿಸಿ ತಪ್ಪಿರುವ ಅರ್ಜಿಯನ್ನು ತಿರಸ್ಕರಿಸಲಾಗುವುದು.
5. ಪ್ರತಿಯೊಂದು ವಿಷಯದಲ್ಲಿ ಕಾರ್ಯಭಾರವನ್ನು ಗಣನೆಗೆ ತೆಗೆದುಕೊಳ್ಳುವಾಗ ಎಲ್ಲಾ Allied related ವಿಷಯಗಳ ಕಾರ್ಯಭಾರವನ್ನು ಪರಿಗಣಿಸಲಾಗುವುದು.
6. ಕೆಲವು ಸಮಾನಾಂತರ ವಿಷಯಗಳಲ್ಲಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಪ್ರತಿಭಾ ಪಟ್ಟಿಯನ್ನು ಒಟ್ಟಿಗೆ ಸೇರಿಸಿ ಪ್ರಕಟಿಸಲಾಗುವುದು.
7. ಸ್ನಾತಕ ವಿಭಾಗಗಳಲ್ಲಿ ಬೋಧಿಸುವ ಕಡ್ಡಾಯ ವಿಷಯಗಳಾದ ಭಾರತ ಸಂವಿಧಾನ, ಪರಿಸರ ಅಧ್ಯಯನ ಮುಂತಾದ ವಿಷಯಗಳಲ್ಲಿ ಯಾರು ಯಾವ ವಿಷಯಗಳನ್ನು ಬೋಧಿಸಬೇಕೆಂಬ ಬಗ್ಗೆ ವಿಶ್ವವಿದ್ಯಾನಿಲಯದ ಆದೇಶದನ್ವಯ ಕ್ರಮವಹಿಸಲಾಗುವ್ವುದು
8. ಅಧಿಸೂಚನೆಯಲ್ಲಿ ನಮೂದಿಸಲಾಗಿರುವ ವಿಷಯಗಳಿಗೆ ಅಗತ್ಯತೆಗೆ ಅನುಗುಣವಾಗಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಹಕ್ಕನ್ನು ವಿಶ್ವವಿದ್ಯಾನಿಲಯ ಹೊಂದಿರುತ್ತದೆ.

18/10/21
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

Scanned with CamScanner